Government of Karnataka
# KARNATAKA EXAMINATIONS AUTHORITY
Sampige Road, 18th Cross, Malleshwaram, Bangalore-560 012 Phone: 080-23 460 460 (5 Lines)
e-mail:keauthority-ka@nic.in Website: http://kea.kar.nic.in

**No. ED/KEA/ADMN/CR-04/2024** **Date: 04-04-2024**

## NOTIFICATION

## DIPLOMA COMMON ENTRANCE TEST – 2024 TO DIPLOMA HOLDERS - FOR ADMISSION TO 2ND YEAR / 3RD SEMESTER ENGINEERING COURSES UNDER LATERAL ENTRY SCHEME (INCLUDING DIPLOMA WORKING PROFESSIONALS)

1. Government in its order No. ED 88 DTE 2022 Bangalore dated 14-07-2022, has allowed eligible Diploma holders to select any engineering branch for admission to 2$^{nd}$ Year / 3$^{rd}$ Semester under lateral entry scheme.
2. Further, the Government in its order ED 137 DTE 2023 dated 12-12-2023, has given permission to Diploma Working Professionals for admission to to 2$^{nd}$ Year / 3$^{rd}$ Semester under lateral entry scheme. (Subject to issue of seat matrix)
3. Pursuant to the Government directions, KEA is inviting online applications from eligible Diploma Holders and Diploma Working Professionals for admission to 2$^{nd}$ Year / 3$^{rd}$ Semester Engineering Courses under Lateral Entry Scheme in “Engineering Colleges” for the year 2024-25.
4. All Candidates (including working professionals) have to appear for the Diploma Common Entrance Test-2024 conducted by the Karnataka Examinations Authority to become eligible for admission to engineering courses under lateral entry scheme.
5. For admission to Architecture course, candidates should have appeared and qualified in NATA-2024 (National Aptitude Test in Architecture) conducted by the Council of Architecture. (Further the candidates must compulsorily register for DCET-2024, fill the application through online and pay the application fees.)
6. Admission to Engineering colleges to Diploma Working Professionals is subject to the seat matrix to be issued by the Government.
7. **Academic Eligibility:** The details of academic eligibility for all the above courses are available on the KEA website **http://kea.kar.nic.in.** The candidates are advised to verify the eligibility criteria before applying for any of the courses.
8. **Syllabus:** The revised DCET syllabus issued by Department of Collegiate and Technical Education is hosted on the KEA Website for the information of the candidates. (Common to all Engineering Diploma Programmes).

| | | |
|---|---|---|
| i. | Commencement of Registration and filling of Application-cum-verification module | **From 11.00 am on 20-04-2024** |
| ii. | Last date to fill the application online | **03-05-2024 up to 11.59 pm** |
| iii. | Last date to pay the application fees-online | **06-05-2024 up to 6.00 pm** |
| iv. | Downloading of Admission Tickets for DCET-2024 from KEA website. | **Will be notified later** |

**NOTE:**

- *Online application is application-cum-verification module and there will be no physical verification. The student entries pertaining to school study, Kannada medium, caste, income etc will be verified through SATS / Revenue department web service. The candidates are advised to fill all the details carefully and upload the necessary documents.*
- The information / particulars entered by the candidates online for Diploma CET-2024 will be deemed as “Final” and will be the basis for further process. No change in any information entered by the candidates will be entertained.
- The information entered online by the candidates with regard to Caste / Category and Annual Income remains same for the purpose of assignment of ranks / selection or allotment of a seat and no change will be entertained in future for any reasons.

**Online mode & method of conducting DCET-2024, exam date & time table will be notified later.**

NOTE: Visit KEA Website **http://kea.kar.nic.in** for more details.

**Sd/-**
**Executive Director.**

**DIPR/CP/05/2024-25**

12x23Cms

ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 012. ದೂರವಾಣಿ: 080–23 460 460 (5 ಲೈನ್‌ಗಳು)

ಇ–ಮೇಲ್: keauthority-ka@nic.in ವೆಬ್‌ಸೈಟ್: http://kea.kar.nic.in

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್–04/2024 ದಿನಾಂಕ: 04–04–2024

## ಅಧಿಸೂಚನೆ

## ಡಿಪ್ಲೊಮಾ ಅಭ್ಯರ್ಥಿಗಳಿಗೆ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಪ್ರವೇಶಕ್ಕೆ ಡಿಪ್ಲೊಮ ಸಾಮಾನ್ಯ ಪ್ರವೇಶ ಪರೀಕ್ಷೆ–2024
## (ವೃತ್ತಿಪರ ಡಿಪ್ಲೊಮ ಪದವೀಧರ (working professionals) ಅಭ್ಯರ್ಥಿಗಳೂ ಸೇರಿದಂತೆ)

1. ಸರ್ಕಾರದ ಆದೇಶ ಸಂಖ್ಯೆ ಇಡಿ 88 ಡಿಟಿಇ 2022 ಬೆಂಗಳೂರು ದಿನಾಂಕ 14–07–2022 ಅನ್ವಯ ಮೂರು ವರ್ಷಗಳ ಡಿಪ್ಲೊಮ ಇಂಜಿನಿಯರಿಂಗ್ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿ ಅರ್ಹತೆಯನ್ನು ಪಡೆದಿರುವ ಅಭ್ಯರ್ಥಿಗಳು ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ನೇರವಾಗಿ ಯಾವುದೇ ಇಂಜಿನಿಯರಿಂಗ್ ಕೋರ್ಸ್‌ಗಳನ್ನು ಆಯ್ಕೆ ಮಾಡಿಕೊಳ್ಳಲು ಆದೇಶಿಸಿದೆ.
2. ಮುಂದುವರಿದು ಸರ್ಕಾರವು ತನ್ನ ಪತ್ರ ಸಂಖ್ಯೆ ಇಡಿ 137 ಡಿಟಿಇ 2023 ಬೆಂಗಳೂರು ದಿನಾಂಕ 12–12–2023 ರಲ್ಲಿ, ವೃತ್ತಿಪರ ಡಿಪ್ಲೊಮ ಪದವೀಧರ (working professional) ಅಭ್ಯರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷ / 3ನೇ ಸೆಮಿಸ್ಟರ್ ಇಂಜಿನಿಯರಿಂಗ್ ಕೋರ್ಸುಗಳಿಗೆ ಪ್ರವೇಶಾತಿ ನೀಡಲು ಆದೇಶಿಸಿದೆ. (ನೀಡಲಾಗುವ ಸೀಟ್ ಮ್ಯಾಟ್ರಿಕ್ಸ್ ನೀಡಿಕೆಗೆ ಒಳಪಟ್ಟು).
3. ಸರ್ಕಾರದ ಆದೇಶದ ಅನ್ವಯ 2024–25ನೇ ಸಾಲಿಗೆ ಪ್ರಾಧಿಕಾರವು ಲ್ಯಾಟರಲ್ ಎಂಟ್ರಿ ಮೂಲಕ 2ನೇ ವರ್ಷದ ಅಥವಾ 3ನೇ ಸೆಮಿಸ್ಟರ್‌ನ **"ಇಂಜಿನಿಯರಿಂಗ್ ಕಾಲೇಜುಗಳ"** ಪ್ರವೇಶಾತಿಗೆ ಅರ್ಹ ಡಿಪ್ಲೊಮ ಅಭ್ಯರ್ಥಿಗಳಿಂದ ಹಾಗು ಆಸಕ್ತಿಯುಳ್ಳ ವೃತ್ತಿಪರ ಡಿಪ್ಲೊಮ ಪದವೀಧರ (working professional) ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.
4. ಎಲ್ಲಾ ಅಭ್ಯರ್ಥಿಗಳು, ಲ್ಯಾಟರಲ್ ಎಂಟ್ರಿ ಮೂಲಕ ಇಂಜಿನಿಯರಿಂಗ್ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಹತೆ ಪಡೆಯಲು, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ 2024ರ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕು. ವೃತ್ತಿಪರ ಡಿಪ್ಲೊಮ ಪದವೀಧರ (working professional) ಅಭ್ಯರ್ಥಿಗಳೂ ಸಹ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕು.
5. ಆರ್ಕಿಟೆಕ್ಚರ್ ಪ್ರವೇಶಕ್ಕೆ ಕೌನ್ಸಿಲ್ ಆಫ್ ಆರ್ಕಿಟೆಕ್ಚರ್ ನವರು ನಡೆಸಿದ NATA-2024 ಪರೀಕ್ಷೆಗೆ ಹಾಜರಾಗಿ valid NATA score ಅನ್ನು ಹೊಂದಿರಬೇಕು ಮತ್ತು ಕಡ್ಡಾಯವಾಗಿ ಆನ್ ಲೈನ್ ಮೂಲಕ ನೊಂದಣಿ ಮಾಡಿ ಅರ್ಜಿ ಸಲ್ಲಿಸಿ ಶುಲ್ಕವನ್ನು ಪಾವತಿಸಬೇಕು.
6. ವೃತ್ತಿಪರ ಡಿಪ್ಲೊಮ ಪದವೀಧರ (working professional) ಅಭ್ಯರ್ಥಿಗಳಿಗೆ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರವೇಶವು ಸರ್ಕಾರವು ನೀಡುವ ಸೀಟ್ ಮ್ಯಾಟ್ರಿಕ್ಸ್‌ಗೆ ಒಳಪಟ್ಟಿರುತ್ತದೆ.
7. **ಶೈಕ್ಷಣಿಕ ವಿದ್ಯಾರ್ಹತೆ:** ಮೇಲಿನ ಎಲ್ಲಾ ಕೋರ್ಸ್‌ಗಳ ಪ್ರವೇಶಕ್ಕೆ ವಿವರವಾದ ಅರ್ಹತೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ನಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು, ಯಾವುದೇ ಕೋರ್ಸಿಗೆ ಅರ್ಜಿ ಸಲ್ಲಿಸುವ ಮೊದಲು ಅರ್ಹತಾ ವಿವರವನ್ನು ಪರಿಶೀಲಿಸಲು ಕೋರಲಾಗಿದೆ.
8. **ಪಠ್ಯಕ್ರಮ:** ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಿಂದ ನೀಡಿರುವ ಡಿಸಿಇಟಿ–2024ರ ಪರೀಕ್ಷೆಯ ಪಠ್ಯಕ್ರಮಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ. (ಎಲ್ಲಾ ಡಿಪ್ಲೊಮ ವಿಭಾಗಗಳಿಗೆ ಸಾಮಾನ್ಯವಾದದು).

| | | |
|---|---|---|
| i. | ನೊಂದಣಿ ಹಾಗು ಆನ್‌ಲೈನ್ ಮೂಲಕ ಅರ್ಜಿ (application-cum-verification module) ಸಲ್ಲಿಸಲು ಪ್ರಾರಂಭಿಕ ದಿನಾಂಕ | **20–04–2024 ಬೆ. 11.00 ರಿಂದ** |
| ii. | ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **03–05–2024 ರಾತ್ರಿ 11.59 ರ ವರೆಗೆ** |
| iii. | ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **06–05–2024 ಸಂಜೆ 6.00 ರವರೆಗೆ** |
| iv. | ಡಿಸಿಇಟಿ–2024ಕ್ಕೆ ಪ್ರವೇಶ ಪತ್ರವನ್ನು ಪ್ರಾಧಿಕಾರದ ವೆಬ್‌ಸೈಟಿನಿಂದ ಡೌನ್‌ಲೋಡ್ ಮಾಡುವುದು. | **ನಂತರ ತಿಳಿಸಲಾಗುವುದು** |

**ಸೂಚನೆ:**

- ಆನ್‌ಲೈನ್ ಅರ್ಜಿ ಸಲ್ಲಿಸುವಿಕೆಯನ್ನು application-cum-verification module ಆಗಿ ಸಿದ್ದಪಡಿಸಲಾಗಿದೆ. ಅಭ್ಯರ್ಥಿಗಳು ದಾಖಲಿಸುವ ವಿವರಗಳನ್ನು ಅಂದರೆ, ಶಾಲೆಗಳ ವ್ಯಾಸಂಗ, ಕನ್ನಡ ಮಾಧ್ಯಮ, ಜಾತಿ, ಆದಾಯ ಮುಂತಾದ ವಿವರಗಳನ್ನು SATS ಹಾಗು ಕಂದಾಯ ಇಲಾಖೆಯ ವೆಬ್‌ಸರ್ವೀಸ್ ಮುಖಾಂತರ ಆನ್‌ಲೈನ್ ಮೂಲಕವೇ ಪರಿಶೀಲಿಸಲಾಗುವುದು. ಭೌತಿಕವಾಗಿ ದಾಖಲೆಗಳ ಪರಿಶೀಲನೆ ಇರುವುದಿಲ್ಲ.
- ಅಭ್ಯರ್ಥಿಗಳು ಆನ್ ಲೈನ್ ಮೂಲಕ ಡಿಪ್ಲೊಮ ಸಿಇಟಿ–2024ಕ್ಕೆ ದಾಖಲಿಸಿದ ಎಲ್ಲಾ ಮಾಹಿತಿಗಳನ್ನು ಅಂತಿಮ ಎಂದು ಪರಿಗಣಿಸಲಾಗುತ್ತದೆ ಮತ್ತು ಈ ಮಾಹಿತಿಯೇ ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಆಧಾರವಾಗಿರುತ್ತದೆ ಹಾಗೂ ಯಾವುದೇ ಕಾರಣಕ್ಕೂ ದಾಖಲಿಸಿದ ಮಾಹಿತಿಯನ್ನು ಬದಲಾಯಿಸಲು ಅವಕಾಶವಿರುವುದಿಲ್ಲ.
- **ಡಿಪ್ಲೊಮಾ ಸಿಇಟಿ–2024 ರ ಅರ್ಜಿ ನಮೂನೆಯಲ್ಲಿ ಜಾತಿ / ವರ್ಗ ಮತ್ತು ವಾರ್ಷಿಕ ಆದಾಯದ ಬಗ್ಗೆ ಒದಗಿಸಿರುವ ಮಾಹಿತಿಯು ವಿದ್ಯಾರ್ಥಿಗಳಿಗೆ ರ್‍ಯಾಂಕ್ ನೀಡುವುದಕ್ಕೆ / ಸೀಟು ಆಯ್ಕೆ ಮಾಡುವುದಕ್ಕೆ ಪರಿಗಣಿಸಲಾಗುವುದು ಮತ್ತು ಯಾವುದೇ ಕಾರಣಕ್ಕೂ ಬದಲಾಯಿಸಲು ಅವಕಾಶವಿರುವುದಿಲ್ಲ.**

**2024 ರ ಡಿಪ್ಲೊಮಾ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಆನ್‌ಲೈನ್ ಮೂಲಕ ನಡೆಸುವ ವಿಧಾನ, ಪರೀಕ್ಷಾ ದಿನಾಂಕ ಮತ್ತು ವೇಳಾಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು.**

ವಿ.ಸೂ. ಹೆಚ್ಚಿನ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in**ಗೆ ಭೇಟಿ ನೀಡಲು ಸೂಚಿಸಿದೆ.

ಸಹಿ/–

ಕಾರ್ಯನಿರ್ವಾಹಕ ನಿರ್ದೇಶಕರು

ವಾಸಾಸಂಇ/ವಾಪ್ರ/05/2024–25

12x23Cms